**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–45)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ 2013ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ 2013 (2015ರ ಕರ್ನಾಟಕ ಅಧಿನಿಯಮ 25)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು, ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು .

**2. ಪ್ರಕರಣ 1ರ ತಿದ್ದುಪಡಿ.-** ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ 2013 (2015ರ ಕರ್ನಾಟಕ ಅಧಿನಿಯಮ 25)ರ (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 1ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿನ "ಹತ್ತು ವರ್ಷಗಳ ಅವಧಿಯವರೆಗೆ" ಎಂಬ ಪದಗಳ ಬದಲಿಗೆ "ಇಪ್ಪತ್ತು ವರ್ಷಗಳ ಅವಧಿಯವರೆಗೆ" ಎಂಬ ಪದಗಳನ್ನು, 2025ರ ಮೇ ಇಪ್ಪತ್ತೇಳನೇ ದಿನಾಂಕದಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಿರುವುದಾಗಿ ಭಾವಿಸತಕ್ಕದ್ದು.

**3. ಪ್ರಕರಣ 8ರ ತಿದ್ದುಪಡಿ.-** ಮೂಲ ಅಧಿನಿಯಮದ 8ನೇ ಪ್ರಕರಣದಲ್ಲಿನ "ದಂಡ ಪ್ರಕ್ರಿಯಾ ಸಂಹಿತೆ, 1973 ರಲ್ಲಿ (1974ರ ಕೇಂದ್ರ ಅಧಿನಿಯಮ ಸಂಖ್ಯೆ 2)" ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳ ಬದಲಿಗೆ "ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, 2023 (2023ರ ಕೇಂದ್ರ ಅಧಿನಿಯಮ 46)ರಲ್ಲಿ" ಎಂಬ ಪದಗಳು, ಅಂಕಿಗಳು ಮತ್ತು ಆವರಣ ಚಿಹ್ನೆಗಳನ್ನು ಪ್ರತಿಯೋಜಿಸತಕ್ಕದು.

**4. ಹೊಸ ಪ್ರಕರಣ 10ರ ಸೇರ್ಪಡೆ**.- ಮೂಲ ಅಧಿನಿಯಮದ 9ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"**10. ತೊಂದರೆಗಳ ನಿವಾರಣಾ ಅಧಿಕಾರ.-** (1)ಈ ಅಧಿನಿಯಮದ ಉಪಬಂಧಗಳು ಜಾರಿಗೆ ತರುವಲ್ಲಿ ಯಾವುದೇ ತೊಂದರೆಗಳು ಉದ್ಭವಿಸಿದಲ್ಲಿ, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಅವಶ್ಯಕವೆಂದು ಕಂಡುಬರಬಹುದಾದಂಥ ಅಥವಾ ತೊಂದರೆಗಳನ್ನು ನಿವಾರಿಸಲು ಯುಕ್ತವಾದಂಥ ಉಪಬಂಧಗಳನ್ನು ರಚಿಸಬಹುದು.

(2) ಉಪಪ್ರಕರಣ (1)ರಡಿ ಮಾಡಲಾದ ಪ್ರತಿ ಆದೇಶವನ್ನು ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಮುಂದೆ ಮಂಡಿಸತಕ್ಕದ್ದು."

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ 2013 (2015ರ ಕರ್ನಾಟಕದ ಅಧಿನಿಯಮ 25)ನ್ನು, ಹತ್ತು ವರ್ಷಗಳ ಮತ್ತಷ್ಟು ಅವಧಿಗೆ ಸದರಿ ಅಧಿನಿಯಮದ ಉಪಬಂಧಗಳು ಜಾರಿಯಲ್ಲಿರುವುದನ್ನು ಮುಂದುವರೆಸಲು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚುವರಿ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ರಾಮಲಿಂಗಾ ರೆಡ್ಡಿ**
ಸಾರಿಗೆ ಮತ್ತು ಮುಜರಾಯಿ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 2013**

**(2015ರ ಕರ್ನಾಟಕದ ಅಧಿನಿಯಮ 25)ರ ಉದ್ಧೃತ ಭಾಗ**

**XXX XXX XXX**

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ :-** (1) ಈ ಅಧಿನಿಯಮವನ್ನು ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು, ಇಡೀ ಕರ್ನಾಟಕ ರಾಜ್ಯಕ್ಕೆ ಅನ್ವಯಿಸತಕ್ಕದ್ದು.

(3) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು ಮತ್ತು ಹತ್ತು ವರ್ಷಗಳ ಅವಧಿಯವರೆಗೆ ಜಾರಿಯಲ್ಲಿ ಇರತಕ್ಕದ್ದು.

**XXX XXX XXX**

**8. ವಾರಂಟಿಲ್ಲದೆ ದಸ್ತಗಿರಿ ಮಾಡಲು ಅಧಿಕಾರ**.- (1) ದಂಡ ಪ್ರಕ್ರಿಯಾ ಸಂಹಿತೆ, 1973 ರಲ್ಲಿ (1974ರ ಕೇಂದ್ರ ಅಧಿನಿಯಮ ಸಂಖ್ಯೆ 2) ಏನೇ ಇದ್ದರೂ, ಈ ಅಧಿನಿಯಮದ ಅಡಿಯಲ್ಲಿ ಯಾವೊಬ್ಬ ವ್ಯಕ್ತಿಯು ಯಾವುದೇ ಅಪರಾಧ ಮಾಡಿರುವನೆಂದು ಯಾವೊಬ್ಬ ಪೊಲೀಸ್ ಅಧಿಕಾರಿಯು ಸಕಾರಣವಾಗಿ ಸಂಶಯಪಟ್ಟಲ್ಲಿ, ಆತನನ್ನು ವಾರಂಟಿಲ್ಲದೆ ದಸ್ತಗಿರಿ ಮಾಡಬಹುದು.

(2) ಈ ಅಧಿನಿಯಮದಲ್ಲಿನ ಎಲ್ಲಾ ಅಪರಾಧಗಳು ಜಾಮೀನೀಯವಾಗಿಲ್ಲದಿರತಕ್ಕದ್ದು.

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 16ನೇ ಆಗಸ್ಟ್ 2025